# SEPTEMBER 20, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ವಸ್ತುನಿಷ್ಠ ಪತ್ರಿಕೋದ್ಯಮಕ್ಕೆ ಆದ್ಯತೆ, ಊಹಾತ್ಮಕ ಪತ್ರಿಕೋದ್ಯಮಕ್ಕೆ ಕಡಿವಾಣ ಅಗತ್ಯ–ಮುಖ್ಯಮಂತ್ರಿ ಅಭಿಮತ.

- ಪ್ರಗತಿ ಬಗ್ಗೆ ಯಾವುದೇ ದೂರದೃಷ್ಟಿ ಇಲ್ಲದ ಸರ್ಕಾರದಿಂದ ದುರಾಡಳಿತ–ವಿಧಾನಸಭೆ ವಿಪಕ್ಷ ನಾಯಕರಿಂದ ಆರೋಪ.

- ಕೋಟಿ ವೃಕ್ಷ ಅಭಿಯಾನದ ಮೂಲಕ ವಿಜಯಪುರ ಜಿಲ್ಲೆಯಲ್ಲಿಅರಣ್ಯ ಪ್ರದೇಶ ಹೆಚ್ಚಳ– ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ.

- ಕೃಷಿ ಯಂತ್ರೋಪಕರಣಗಳ ಮೇಲಿನ ಜಿಎಸ್‌ಟಿ ಕಡಿತ: ರೈತರಿಗೆ ನೇರ ಪ್ರಯೋಜನ–ಕೇಂದ್ರ ಕೃಷಿ ಸಚಿವ ಶಿವರಾಜಸಿಂಗ ಚೌಹಾಣ.

ಈಗ ವಾರ್ತೆಗಳ ವಿವರ

*******

ಪತ್ರಿಕೆಗಳ ಮೂಲಕ ನೀಡುವ ಮಾಹಿತಿ ವಸ್ತುನಿಷ್ಠವಾಗಿರಬೇಕು. ಊಹಾತ್ಮಕ ಪತ್ರಕೋದ್ಯಮಕ್ಕೆ ಕಡಿವಾಣ ಹಾಕುವುದು ಅಗತ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ 2024ನೇ ಸಾಲಿನ ವಡ್ಡರ್ಸೆ ರಘುರಾಮ ಶೆಟ್ಟಿ ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಹಾಗೂ 2017 ರಿಂದ, 23 ನೇ ಸಾಲಿನ ಪರಿಸರ ಮತ್ತು ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು. ಪತ್ರಿಕೋದ್ಯಮ ಪ್ರಜಾಪ್ರಭುತ್ವದ ನಾಲ್ಕನೇ ಅಂಗ. ಪತ್ರಿಕೋದ್ಯಮದ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವ ಜೊತೆಗೆ ಸತ್ಯ ಸಂಗತಿಯನ್ನು ಮನವರಿಕೆ ಮಾಡಿಕೊಡುವುದು ಅವಶ್ಯ. ಪತ್ರಕರ್ತರು ನೀಡುವ ಮಾಹಿತಿಗಳು ಸಮಾಜಮುಖಿಯಾಗಿರಬೇಕು ಎಂದು ಮುಖ್ಯಮಂತ್ರಿ ಹೇಳಿದರು.

*******

ಹಿಂದುಳಿದ ವರ್ಗಗಳ ಆಯೋಗ ಶಾಸನಬದ್ಧ ಸಂಸ್ಥೆಯಾಗಿದ್ದು, ಅವರಿಗೆ ಯಾವುದೇ ನಿರ್ದೇಶನಗಳನ್ನು ನೀಡಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮೀಕ್ಷೆಯ ಬಗ್ಗೆ ಅಭಿಪ್ರಾಯಗಳನ್ನು ಆಯೋಗಕ್ಕೆ ವಿವರಿಸಲಾಗಿದ್ದು, ಆಯೋಗವೇ ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂದರು. ಆರ್ಥಿಕ, ಸಾಮಾಜಿಕ ಸಮೀಕ್ಷೆಗೆ ಸಚಿವ ಸಂಪುಟದಲ್ಲಿ ವಿರೋಧ ವ್ಯಕ್ತವಾಗಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಈ ವಿಚಾರದಲ್ಲಿ ವಿಪಕ್ಷ ಬಿಜೆಪಿ ರಾಜಕೀಯ ಮಾಡುತ್ತಿದ್ದು, ಕಾಂಗ್ರೆಸ್ ಸರ್ಕಾರ ಹಿಂದೂ ವಿರೋಧಿ ಎಂದು ಬಿಂಬಿಸಲಾಗುತ್ತಿದೆ. ಇದನ್ನು ಒಕ್ಕೊರಲಿನಿಂದ ಖಂಡಿಸುವಂತೆ ಎಲ್ಲ ಸಚಿವರಿಗೂ ಸೂಚಿಸಲಾಗಿದೆ. ಇದೇ 22 ರಿಂದ ಸಮೀಕ್ಷೆ ಆರಂಭವಾಗಲಿದ್ದು, ಸಮೀಕ್ಷೆ ಮುಂದೂಡುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

*******

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ದುರಾಡಳಿತದಲ್ಲಿ ನಿರತವಾಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ರಾಜ್ಯದ ಅಭಿವೃದ್ಧಿಗೆ ಸರ್ಕಾರದ ಬಳಿ ಹಣವಿಲ್ಲ, ಪ್ರಗತಿ ಬಗ್ಗೆ ಯಾವುದೇ ದೂರದೃಷ್ಟಿ ಇಲ್ಲ. ಹೂಡಿಕೆದಾರರನ್ನು ಉದ್ಯಮಿಗಳನ್ನು ಹಿಡಿದಿಟ್ಟುಕೊಳ್ಳುವ ಆಸಕ್ತಿಯಂತೂ ಮೊದಲೇ ಇಲ್ಲ ಎಂದಿದ್ದಾರೆ.

*******

ಕೋಟಿ ವೃಕ್ಷ ಅಭಿಯಾನದ ಮೂಲಕ ಬರಪೀಡಿತ ಪ್ರದೇಶ ಎಂಬ ಹಣೆಪಟ್ಟಿ ಹೊಂದಿದ್ದ ವಿಜಯಪುರ ಜಿಲ್ಲೆಯಲ್ಲಿಅರಣ್ಯ ಪ್ರದೇಶ ಹೆಚ್ಚಳ ಮಾಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಹೇಳಿದ್ದಾರೆ. ವಿಜಯಪುರದಲ್ಲಿ ಹಮ್ಮಿಕೊಂಡಿದ್ದ ಕೈಗಾರಿಕೆ ಇಲಾಖೆ ವ್ಯಾಪ್ತಿಯ ಕೆಎಸ್‌ಡಿಎಲ್– ಸಿಎಸ್‌ಆರ್ ಅನುದಾನದಲ್ಲಿ ಬೆಳಗಾವಿ, ವಿಜಯಪುರ ಹಾಗೂ ಬಾಗಲಕೋಟೆ ವಿಭಾಗದ ಅರಣ್ಯ ಇಲಾಖೆ ಸಿಬ್ಬಂದಿಗೆ ಕಿಟ್ ವಿತರಣಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. 0.17 ರಷ್ಟಿದ್ದ ಜಿಲ್ಲೆಯ ಅರಣ್ಯ ಪ್ರದೇಶವನ್ನು ಶೇಕಡಾ 2 ರ ಷ್ಟು ಹೆಚ್ಚಿಸಲಾಗಿದೆ. ಮುಂದಿನ ದಿನಗಳಲ್ಲಿ ಶೇಕಡಾ 10 ರ ಷ್ಟು ಹೆಚ್ಚಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

*******

ಹೊಸಪೇಟೆ ತಾಲೂಕಿನ ಗಾದಿಗನೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸ್ವಾಸ್ಥ ನಾರಿ, ಸಶಕ್ತ ಪರಿವಾರ ಅಭಿಯಾನಕ್ಕೆ ವೈದ್ಯೆ ಡಾ.ದಿವ್ಯಾಶ್ರೀ ಚಾಲನೆ ನೀಡಿದರು.ಈ ಸಂದರ್ಭದಲ್ಲಿ ಮಾತನಾಡಿದ ಅವರು, ಒತ್ತಡದ ಬದುಕಿನಲ್ಲಿ ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸದೇ ನಿರ್ಲಕ್ಷಿಸುತ್ತಿರುವುದರಿಂದ ಅನೇಕ ಆರೋಗ್ಯ ಸಮಸ್ಯೆಗಳನ್ನು ಅನುಭವಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಅನೇಕ ಆರೋಗ್ಯ ಸೇವೆಗಳು ಲಭ್ಯವಿದ್ದು, ಸರ್ಕಾರದ ಆರೋಗ್ಯ ಸೇವೆಗಳನ್ನು ಸಮರ್ಪಕವಾಗಿ ಪಡೆಯಲು ಅಭಿಯಾನದ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

*******

ಕೃಷಿ ಯಂತ್ರೋಪಕರಣಗಳ ಮೇಲಿನ ಜಿ.ಎಸ್.ಟಿ ಕಡಿತ ರೈತರಿಗೆ ನೇರವಾಗಿ ಪ್ರಯೋಜನವನ್ನು ನೀಡುತ್ತದೆ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಜಿ.ಎಸ್.ಟಿ ಸುಧಾರಣೆಗಳ ಕುರಿತು ಚರ್ಚಿಸಲು ನವದೆಹಲಿಯಲ್ಲಿ ನಡೆದ ಮಹತ್ವದ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ಶೇಕಡ 12 ಮತ್ತು ಶೇಕಡ 18 ರಷ್ಟಿದ್ದ ತೆರಿಗೆಯನ್ನು ಈಗ ಶೇಕಡ 5 ಕ್ಕೆ ಇಳಿಸಲಾಗಿದ್ದು, ಇದೇ 22 ರಿಂದ ಜಾರಿಗೆ ಬರಲಿದೆ. ಜಾರಿಗೆ ಬರಲಿರುವ ಕಡಿಮೆ ಜಿ.ಎಸ್.ಟಿ ದರಗಳು ರೈತರಿಗೆ ಸಂಪೂರ್ಣ ಪಾರದರ್ಶಕತೆಯೊಂದಿಗೆ ನೇರವಾಗಿ ಪ್ರಯೋಜನ ನೀಡಬೇಕು ಎಂದು ಸಭೆಯಲ್ಲಿ ಯಂತ್ರ ತಯಾರಕರ ಸಂಘಗಳ ಎಲ್ಲಾ ಪ್ರತಿನಿಧಿಗಳಿಗೆ ತಿಳಿಸಲಾಗಿದೆ ಎಂದು ಸಚಿವರು ಹೇಳಿದರು.

*******

ತೆರಿಗೆ ರಚನೆ ಸರಳಗೊಳಿಸುವ ಮತ್ತು ನಾಗರಿಕರ ಮೇಲಿನ ಆರ್ಥಿಕ ಹೊರೆ ಕಡಿಮೆ ಮಾಡುವ ಉದ್ದೇಶದಿಂದ ಜಾರಿಗೊಳಿಸಲಾದ ಜಿಎಸ್‌ಟಿ ಸುಧಾರಣಾ ಕ್ರಮಗಳು ಆಟೋಮೊಬೈಲ್ ಉದ್ಯಮದ ಮೇಲೆ ವಿಶೇಷ ಪರಿಣಾಮ ಬೀರಲಿವೆ. ದ್ವಿಚಕ್ರ ವಾಹನಗಳು ಮತ್ತು ಸಣ್ಣ ಕಾರುಗಳ ಮೇಲಿನ ತೆರಿಗೆ ದರಗಳಲ್ಲಿ ಪ್ರಮುಖ ಕಡಿತ ಘೋಷಿಸಿದ್ದು, ಜಿಎಸ್‌ಟಿ ದರವನ್ನು ಶೇಕಡಾ 28 ರಿಂದ ಶೇಕಡಾ 18 ಕ್ಕೆ ಇಳಿಸಲಾಗಿದೆ. ಜಿಎಸ್‌ಟಿ ಕಡಿತಗೊಳಿಸಿರುವ ಈ ಕ್ರಮ ಉತ್ಪಾದನೆ, ಮಾರಾಟ, ಸೇವೆಗಳು ಮತ್ತು ಉದ್ಯೋಗ ಸೃಷ್ಟಿಯನ್ನು ಬೆಂಬಲಿಸುತ್ತದೆ, ಇದು ದೇಶದ ಬೆಳವಣಿಗೆಯ ವೇಗವನ್ನು ಬಲಪಡಿಸುತ್ತದೆ. ಹೊಸ ತೆರಿಗೆ ದರಗಳು ಸೋಮವಾರದಿಂದ ಜಾರಿಗೆ ಬರಲಿವೆ.

*******

ಈಗ ಪ್ರಕಟಣೆ.. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

*******

ಧ್ಯೇಯ ಸಂಗೀತ– 10 ಸೆಕೆಂಡುಗಳು

ಸೇವೆ ಮತ್ತು ಸುಶಾಸನ, ಧ್ಯೇಯದೊಂದಿಗೆ 11 ವರ್ಷಗಳನ್ನು ಪೂರ್ಣಗೊಳಿಸಿದ, ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ಪರಿವರ್ತನೆ ಹಾಗೂ ಪ್ರಗತಿಗಾಗಿ, ದೇಶಾದ್ಯಂತ ಸೇವಾ ಪರ್ವವನ್ನು ಆಚರಿಸುತ್ತಿದೆ. ಕಳೆದ 11 ವರ್ಷಗಳಲ್ಲಿ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶದ ಆರೋಗ್ಯ ರಕ್ಷಣೆ ಕ್ಷೇತ್ರದಲ್ಲಿ ಹಲವು ಮಹತ್ವದ ಬದಲಾವಣೆಗಳಾಗಿವೆ. 2018 ರಲ್ಲಿ ಕೇಂದ್ರ ಸರ್ಕಾರ ಆಯುಷ್ಮಾನ ಭಾರತ ಯೋಜನೆ ಆರಂಭಿಸಿತ್ತು. ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ, ಜಗತ್ತಿನ ಅತಿ ದೊಡ್ಡ ಆರೋಗ್ಯ ಭರವಸೆ ನೀಡುವ ಕಾರ್ಯಕ್ರಮವಾಗಿತ್ತು. ಯೋಜನೆಯಡಿ ಪ್ರತಿ ಕುಟುಂಬಕ್ಕೆ ವಾರ್ಷಿಕ 5 ಲಕ್ಷದವರೆಗೆ ಆರೋಗ್ಯ ಸೇವೆ ವೆಚ್ಚವನ್ನು ಸರ್ಕಾರದಿಂದ ಭರಿಸಲಾಗುತ್ತಿದ್ದು, 12 ಕೋಟಿ

ಕುಟುಂಬಗಳ 55 ಕೋಟಿ ಜನ ಈ ಯೋಜನೆಯ ಪ್ರಯೋಜನ ಪಡೆದಿದ್ದಾರೆ. ಕಳೆದ ಅಕ್ಟೋಬರ್ 29 ರಂದು, ಯೋಜನೆಯ ವ್ಯಾಪ್ತಿ ವಿಸ್ತರಣೆ ಘೋಷಿಸಿ, 70 ವರ್ಷ ಪೂರೈಸಿರುವ ಪ್ರತಿಯೊಬ್ಬರು ಈ ಯೋಜನೆಯಡಿ ಸೌಲಭ್ಯಕ್ಕೆ ಅರ್ಹರಾಗಿದ್ದಾರೆ ಎಂದು ತಿಳಿಸಿದ್ದರು.

ಧ್ವನಿ–ನರೇಂದ್ರ ಮೋದಿ–17 ಸೆಕೆಂಡ್ಸ್

*******

ಹಿಂದುಳಿದ ವರ್ಗಗಳ ಆಯೋಗದಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಇದೇ 22 ರಿಂದ ಅಕ್ಟೋಬರ್ 7 ರವರೆಗೆ ನಡೆಯಲಿದ್ದು, ಕೋಲಾರ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ವಾಕಥಾನ್ ಹಮ್ಮಿಕೊಳ್ಳಲಾಗಿತ್ತು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ.

*******

ಇದೇ 22 ರಿಂದ ಅಕ್ಟೋಬರ್ 7 ರವರೆಗೆ ಹಿಂದುಳಿದ ವರ್ಗಗಳ ಸಾಮಾಜಿಕ–ಶೈಕ್ಷಣಿಕ ಸಮೀಕ್ಷೆ ಜರುಗಲಿದ್ದು, ಜಿಲ್ಲೆಯಲ್ಲಿ 4,880 ಗಣತಿದಾರರಿಂದ 5,46,012 ಕುಟುಂಬಗಳ ಸಮೀಕ್ಷೆ ಮಾಡಲಾಗುತ್ತದೆ ಎಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ಮೂಲಕ ಮಾಹಿತಿ ನೀಡಿರುವ ಅವರು, ಈ ಕುರಿತು ಪ್ರಕಟಣೆ ನೀಡಿರುವ ಅವರು, ಹೆಸ್ಕಾಂ ವಿದ್ಯುತ್ ಮೀಟರ್ ರೀಡರ್‌ಗಳ ಮೂಲಕ ಮನೆ,ಮನೆಗೆ ಭೇಟಿ ನೀಡಿ ಜಿಯೋ ಟ್ಯಾಗಿಂಗ್ ಮಾಡುವ ಕಾರ್ಯ ಈಗಾಗಲೇ ಪ್ರಾರಂಭವಾಗಿದೆ. 90 ದಿನಗಳ ಅವಧಿಯಲ್ಲಿ ಸಮೀಕ್ಷೆ ಪೂರ್ಣಗೊಳಿಸುವ ಬದ್ಧತೆಯೊಂದಿಗೆ ಈ ಕಾರ್ಯ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ–3,937, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಇಲಾಖೆಯಿಂದ–238, ಮಹಾನಗರ ಪಾಲಿಕೆಯಿಂದ–326 ಹಾಗೂ ಇತರೆ ಇಲಾಖೆಗಳಿಂದ 211 ಸಿಬ್ಬಂದಿಯನ್ನು ಸಮೀಕ್ಷಾ ಕಾರ್ಯಕ್ಕೆ ನಿಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

*******

ಅಪೌಷ್ಠಿಕತೆ, ರಕ್ತಹೀನತೆ ನೀಗಿಸುವ ಮೂಲಕ ತಾಯಿ ಮರಣ ಸಂಭವಿಸದಂತೆ ನೋಡಿಕೊಳ್ಳಬೇಕು ಎಂದು ಬಾಗಲಕೋಟೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಆರೋಗ್ಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಈ ನಿಟ್ಟಿನಲ್ಲಿ ಸರಕಾರ ಹಲವು ಯೋಜನೆಗಳನ್ನು ರೂಪಿಸಿದೆ. ಅವುಗಳನ್ನು ಪರಿಣಾಮಕಾರಿಯಾಗಿ ಕಾರ್ಯರೂಪಕ್ಕೆ ತರಬೇಕು ಎಂದರು. ರಾಷ್ಟ್ರೀಯ ಟಿಬಿ ನಿರ್ಮೂಲನೆ ಯೋಜನೆಯಡಿ ಜಿಲ್ಲೆಯಲ್ಲಿ ಈಗಾಗಲೇ 27 ಗ್ರಾಮಗಳನ್ನು ಟಿಬಿ ಮುಕ್ತ ಗ್ರಾಮಗಳನ್ನಾಗಿ ಘೋಷಿಸಲಾಗಿದೆ. ಇನ್ನು 64 ಗ್ರಾಮಗಳನ್ನು ಘೋಷಿಸಲು ಶಿಫಾರಸ್ಸು ಮಾಡಲಾಗುತ್ತಿದೆ. ಟಿಬಿ ಮುಕ್ತ ಗ್ರಾಮ ಎಂದು ಘೋಷಿಸಿದ ಮೇಲೆ ಪ್ರಕರಣಗಳು ಕಂಡುಬರಬಾರದು. ಆ ನಿಟ್ಟಿನಲ್ಲಿ ಕೆಲಸ ಆಗಬೇಕ ಎಂದು ಸೂಚನೆ ನೀಡಿದರು.

*******

ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಹಾಗೂ ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆಗಳ ನೋಂದಣಿ ಹೆಚ್ಚಿಸುವ ಬಗ್ಗೆ ದಕ್ಷಿಣ ಕನ್ನಡ ಜಿಲ್ಲೆಯ ಬ್ಯಾಂಕ್‌ಗಳು ಗಮನ ಹರಿಸಬೇಕು ಎಂದು ಮಂಗಳೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನರ್ವಾಡೆ ವಿನಾಯಕ್ ಕಾರ್ಬಾರಿ ಸೂಚಿಸಿದ್ದಾರೆ.

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ವಸ್ತುನಿಷ್ಠ ಪತ್ರಿಕೋದ್ಯಮಕ್ಕೆ ಆದ್ಯತೆ, ಊಹಾತ್ಮಕ ಪತ್ರಿಕೋದ್ಯಮಕ್ಕೆ ಕಡಿವಾಣ ಅಗತ್ಯ–ಮುಖ್ಯಮಂತ್ರಿ ಅಭಿಮತ.

ಪ್ರಗತಿ ಬಗ್ಗೆ ಯಾವುದೇ ದೂರದೃಷ್ಟಿ ಇಲ್ಲದ ಸರ್ಕಾರದಿಂದ ದುರಾಡಳಿತ–ವಿಧಾನಸಭೆ ವಿಪಕ್ಷ ನಾಯಕರಿಂದ ಆರೋಪ.

ಕೋಟಿ ವೃಕ್ಷ ಅಭಿಯಾನದ ಮೂಲಕ ವಿಜಯಪುರ ಜಿಲ್ಲೆಯಲ್ಲಿಅರಣ್ಯ ಪ್ರದೇಶ ಹೆಚ್ಚಳ– ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ.

ಕೃಷಿ ಯಂತ್ರೋಪಕರಣಗಳ ಮೇಲಿನ ಜಿಎಸ್‌ಟಿ ಕಡಿತ: ರೈತರಿಗೆ ನೇರ ಪ್ರಯೋಜನ–ಕೇಂದ್ರ ಕೃಷಿ ಸಚಿವ ಶಿವರಾಜಸಿಂಗ ಚೌಹಾಣ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********